# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 418
ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 18-02-2022.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯಿತಿಗಳಲ್ಲಿ ಪಕ್ಷದ ಚಿಹ್ನೆ ಇಲ್ಲದೆ ಚುನಾವಣೆಗಳನ್ನು ನಡೆಸುತ್ತಿರುವುದರ ಉದ್ದೇಶವೇನು; (ಮಾಹಿತಿ ನೀಡುವುದು) | ಸಂವಿಧಾನ (73ನೇ ತಿದ್ದುಪಡಿ) ಅಧಿನಿಯಮ, 1992 ರ ಅನುಚ್ಛೇಧ 243-ಕೆ ರಲ್ಲಿ ಪಂಚಾಯತಿಗಳಲ್ಲಿ ಚುನಾವಣೆಗಳನ್ನು ನಡೆಸುವ ಬಗ್ಗೆ ಉಪಬಂಧವಿದ್ದು, ಅನುಚ್ಛೇಧ 243-ಕೆ (4) ರಲ್ಲಿ ಈ ಸಂವಿದಾನದ ಉಪಬಂಧಗಳಿಗೆ ಒಳಪಟ್ಟು ಪಂಚಾಯಿತಿಗಳ ಚುನಾವಣೆಗಳಿಗೆ ಅನ್ವಯಿಸುವ ಎಲ್ಲಾ ವಿಷಯಗಳ ಬಗ್ಗೆ ಅಥವಾ ಅವುಗಳ ಸಂಬಂಧದಲ್ಲಿ ವಿಧಾನ ಮಂಡಲವು ಕಾನೂನಿನ ಮೂಲಕ ಉಪಬಂಧವನ್ನು ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಅದರಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 7(2) ರಲ್ಲಿ ಗ್ರಾಮ ಪಂಚಾಯತಿಗೆ ಚುನಾವಣೆಗಳನ್ನು ಪಕ್ಷದ ಆಧಾರ ರಹಿತವಾಗಿ ಗೊತ್ತುಪಡಿಸಬಹುದಾದಂತಹ ನಿಯಮಗಳಿಗೆ ಅನುಸಾರವಾಗಿ ಮತದಾನದ ಮೂಲಕ ನಡೆಸಲು ಅವಕಾಶ ಕಲ್ಪಿಸಲಾಗಿದೆ. |
| (ಆ) | ರಾಜಕೀಯ ಪಕ್ಷದ ಕಾರ್ಯಕರ್ತರಾಗಿದ್ದರೂ ಅವರೆಲ್ಲಾ ಪಕ್ಷದ ಚಿಹ್ನೆಯ ಮೇಲೆ ಚುನಾವಣೆ ಎದುರಿಸದೇ ಇರುವುದರಿಂದ ಪಕ್ಷಾಂತರ ನಿಷೇಧ ಕಾಯ್ದೆ ಅನ್ವಯವಾಗುತ್ತಿಲ್ಲ ಎಂಬುದು ನಿಜವೇ; ಹಾಗಿದ್ದಲ್ಲಿ, ವಿವಿಧ ಚುನಾವಣೆಗಳಲ್ಲಿ ಪಕ್ಷದ ಆಧಾರದ ಮೇಲೆ ಮತದಾನವಾಗದೆ ಇರುವುದರಿಂದ ಅತೀ ಹೆಚ್ಚು ಭ್ರಷ್ಟಾಚಾರಕ್ಕೆ ಪ್ರಸ್ತುತ ವ್ಯವಸ್ಥೆ ಕಾರಣವಾಗಿದೆಯೇ; | ಇಲ್ಲ. |
| (ಇ) | ಹಾಗಿದ್ದಲ್ಲಿ, ಈ ವ್ಯವಸ್ಥೆಯನ್ನು ಬದಲಾಯಿಸಲು ಸರ್ಕಾರದಿಂದ ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ; | ಉದ್ಭವಿಸುವುದಿಲ್ಲ. |

| | | |
|---|---|---|
| (ಈ) | ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ಪಕ್ಷದ ಆಧಾರದ ಮೇಲೆಯೇ ಮತ್ತು ಪಕ್ಷದ ಚಿಹ್ನೆ ಅಡಿಯಲ್ಲಿ ಚುನಾವಣೆ ಎದುರಿಸಲು ವ್ಯವಸ್ಥೆ ರೂಪಿಸಲು ಪಂಚಾಯತ್ ರಾಜ್ ಕಾಯ್ದೆಗೆ ತಿದ್ದುಪಡಿ ತರುವಲ್ಲಿ ಸರ್ಕಾರ ಯೋಜನೆ ರೂಪಿಸಿದೆಯೇ; ಈ ಬಗ್ಗೆ ಸರ್ಕಾರದ ನಿಲುವೇನು? | ಇಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |

ಸಂ. ಗ್ರಾಅಪ 30 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು